**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ನಿರಾಣಿ ಹಣಮಂತ ರುದ್ರಪ್ಪ ಇವರು ನಿಯಮ 72 ರ ಮೇರೆಗೆ ಗಮನ ಸೆಳೆದ ಸೂಚನೆಗೆ ಉತ್ತರಿಸುವ ಬಗ್ಗೆ.**

**ವಿಷಯ:**

ರಾಜ್ಯದ ನೂರಾರು ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಮತ್ತು ಕುಡಿಯುವ ನೀರು ಸೌಲಭ್ಯ ಕಲ್ಪಿಸುವಲ್ಲಿ ಸರ್ಕಾರ ವಿಫಲವಾಗಿದೆಯೆಂದು ಹಾಗೂ ಸರ್ಕಾರದ ನಿರ್ಲಕ್ಷ್ಯದ ದೋರಣೆಯೇ ಖಾಸಗಿ ಶಿಕ್ಷಣ ಸಂಸ್ಥೆಗಳ ಹೆಚ್ಚಳಕ್ಕೆ ಕಾರಣವಾಗಿದೆ ಎಂದು ಹೈಕೋರ್ಟ ಸರ್ಕಾರಕ್ಕೆ ಛೀಮಾರಿ ಹಾಕಿರುತ್ತದೆ. ಪ್ರಸ್ತುತ ರಾಜ್ಯದಲ್ಲಿ ಬಹುತೇಕ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳು ಇಲ್ಲ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಇರುವುದಿಲ್ಲ. ಸರ್ಕಾರಿ ಶಾಲೆಗಳಲ್ಲಿ ಕನಿಷ್ಟ ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯಿಲ್ಲದಿರುವುದು ದುರದೃಷ್ಟಕರ ಸಂಗತಿ. ಇಂತಹ ಸಂಗತಿಗಳ ನಡುವೆ ಸರ್ಕಾರಿ ಶಾಲೆಗಳು ಮುಚ್ಚುವ ಹಂತಕ್ಕೆ ತಲುಪಿದ್ದು, ಕಡು ಬಡ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿರುವುದರ ಕುರಿತಂತೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರಲ್ಲಿ ನಿಯಮ 72ರಡಿ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಜಲಜೀವನ್ ಮಿಶನ್ ಕಾರ್ಯಕ್ರಮದಡಿ 42014 ಶಾಲೆಗಳಲ್ಲಿ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲಾಗಿದೆ. (ejalshakti.gov.in ವೆಬ್‌ಸೈಟ್ ನಲ್ಲಿರುವಂತೆ)

**ಕಳೆದ ಮೂರು ವರ್ಷಗಳಲ್ಲಿ ರಾಜ್ಯ ವಲಯದ ಅನುದಾನದಡಿ ಸರ್ಕಾರಿ ಶಾಲೆಗಳಿಗೆ ಕುಡಿಯುವ ನೀರು ಹಾಗೂ ಶೌಚಾಲಯ ನಿರ್ವಹಣೆಗಾಗಿ, ಶೌಚಾಲಯ ನಿರ್ಮಾಣಕ್ಕಾಗಿ ಮತ್ತು ಇತರೇ ನಿರ್ವಹಣೆ ಸೌಲಭ್ಯಕ್ಕಾಗಿ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ.**

- 2022-23ನೇ ಸಾಲಿನಿಂದ 2024-25ನೇ ಸಾಲಿನವರೆಗೆ ಕುಡಿಯುವ ನೀರು ಹಾಗೂ ಶೌಚಾಲಯ ನಿರ್ವಹಣೆಗಾಗಿ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ.

| ವರ್ಷ | ಬಿಡುಗಡೆಯಾದ ಅನುದಾನ(ರೂ.ಲಕ್ಷಗಳು) |
|---|---|
| 2022-23 | 3500.00 |
| 2023-24 | 7122.00 |
| 2024-25 | 5798.32 |
| ಒಟ್ಟು | 16420.32 |

2022-23ನೇ ಸಾಲಿನಿಂದ 2024-25ನೇ ಸಾಲಿನವರೆಗೆ ಶೌಚಾಲಯ ನಿರ್ಮಾಣಕ್ಕಾಗಿ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ

| ವರ್ಷ | ಮಂಜೂರಾದ ಶಾಲೆಗಳು | ಬಿಡುಗಡೆಯಾದ ಅನುದಾನ |
|---|---|---|
| 2022-23 | 7650 | 3500.00 |
| 2023-24 | | 8000.00 |
| 2024-25 | | 12106.05 |
| **ಒಟ್ಟು** | **7650** | **23606.05** |

ಇನ್ನು ಮುಂದೆಯೂ ಶಾಲಾ ಸೌಲಭ್ಯಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತದೆ. 2025-26ನೇ ಸಾಲಿನಲ್ಲಿ ಶೌಚಾಲಯ ನಿರ್ಮಾಣ ಮತ್ತು ಶೌಚಾಲಯ ನಿರ್ವಹಣೆ ಮತ್ತು ಇತರೇ ನಿರ್ವಹಣೆ ಸೌಲಭ್ಯ ಒದಗಿಸಲು ಈ ಕೆಳಕಂಡಂತೆ ಅನುದಾನ ನಿಗದಿಯಾಗಿರುತ್ತದೆ.

1. ಶೌಚಾಲಯ ಮತ್ತು ಇತರೆ ನಿರ್ವಹಣೆ ವೆಚ್ಚಕ್ಕಾಗಿ **ರೂ.5329.00** ಲಕ್ಷಗಳ ಅನುದಾನದ ಅನುಮೋದನೆ ನೀಡಲಾಗಿದೆ.
2. ಶೌಚಾಲಯ ನಿರ್ಮಾಣ ಕಾಮಗಾರಿಗೆ: **ರೂ.9000.00** ಲಕ್ಷಗಳು

**ಸಮಗ್ರ ಶಿಕ್ಷಣ ಕರ್ನಾಟಕ:-**

- 2019-20ನೇ ಸಾಲಿನಲ್ಲಿ ಮಾನ್ಯ ಉಚ್ಚನ್ಯಾಯಾಲಯದ ನಿರ್ದೇಶನದಂತೆ ಸರ್ಕಾರಿ ಶಾಲೆಗಳಲ್ಲಿ 543 ಶೌಚಾಲಯಗಳು ಹಾಗೂ 312 ಕುಡಿಯುವ ನೀರಿನ ಪ್ಯೂರಿಫೈಯರ್ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.
- 2023-24ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆಯಡಿ ಅನುಮೋದನೆಯಾದ 97 CWSN ಶೌಚಾಲಯಗಳ ನಿರ್ಮಾಣ ಕಾಮಗಾರಿಗಳನ್ನು PWD/PRED ವತಿಯಿಂದ ಕೈಗೊಳ್ಳಲಾಗುತ್ತಿದೆ.
- 2024-25ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆಯಡಿ ಅನುಮೋದನೆಯಾದ 03 ಕುಡಿಯುವ ನೀರಿನ ಸೌಲಭ್ಯವನ್ನು ಕಲ್ಪಿಸಲಾಗಿದೆ.
- 2025-26 ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆಯಡಿ ಅನುಮೋದನೆಯಾದ 298 ಶೌಚಾಲಯಗಳು ಹಾಗೂ 44 ಕುಡಿಯುವ ನೀರಿನ ಸೌಲಭ್ಯವನ್ನು PWD/PRED ವತಿಯಿಂದ ಕೈಗೆತ್ತಿಕೊಳ್ಳಲು ಯೋಜಿಸಲಾಗಿದೆ.

ಮುಂದುವರೆದು, ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆಯಡಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಹಾಗೂ ಅವಶ್ಯವಿರುವ ಶೌಚಾಲಯ ಮತ್ತು ಕುಡಿಯುವ ನೀರು ಸೌಲಭ್ಯದ ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು ಆಧರಿಸಿ ಮಂಜೂರಾದ/ಅನುಮೋದನೆಯಾದ ಕಾಮಗಾರಿಗಳಿಗೆ ಆಯಾ ಸಾಲಿನಲ್ಲಿ ಬಿಡುಗಡೆ ಆಗುವ ಅನುದಾನಕ್ಕೆ ಅನುಗುಣವಾಗಿ ಶೌಚಾಲಯ ಮತ್ತು ಕುಡಿಯುವ ನೀರು ಸೌಲಭ್ಯದ ಕೊರತೆಯನ್ನು ನೀಗಿಸಲು ಕ್ರಮ ವಹಿಸಲಾಗುತ್ತಿದೆ.

**ಸಂಖ್ಯೆ: ಇಪಿ 358 ಯೋಸಕ 2025**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**